# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 933

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 24-02-2023

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿದ್ಯಾನಿಧಿ ಯೋಜನೆಯ ರೂಪುರೇಷೆಗಳೇನು: (ವಿವರ ನೀಡುವುದು) | ರಾಜ್ಯದ ಕೃಷಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ, 2021-22ನೇ ಸಾಲಿನ ಆರ್ಥಿಕ ವರ್ಷದಿಂದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮವನ್ನು ಸರ್ಕಾರದ ಆದೇಶದ ಸಂಖ್ಯೆ:AGRI-AML/141/2021, ದಿನಾಂಕ:07.08.2021, 10.12.2021 ಮತ್ತು 31.12.2021ರನ್ವಯ ಜಾರಿಗೊಳಿಸಲಾಗುತ್ತಿದೆ. ಸದರಿ ಕಾರ್ಯಕ್ರಮದಡಿ, 8, 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣುಮಕ್ಕಳು ಮತ್ತು ಎಸ್.ಎಸ್.ಎಲ್.ಸಿ / 10ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ / ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ, ರೈತರ ಮಕ್ಕಳು ಈ ವಿದ್ಯಾರ್ಥಿವೇತ್ತನ ಪಡೆಯಲು ಅರ್ಹರಿರುತ್ತಾರೆ. ವಿದ್ಯಾರ್ಥಿ ವೇತನವನ್ನು ವಾರ್ಷಿಕವಾಗಿ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer – DBT) ಮೂಲಕ ವರ್ಗಾಯಿಸಲಾಗುವುದು.<br><br>ವಿದ್ಯಾರ್ಥಿ ವೇತನ ಪಡೆಯಲು ಅನುಸರಿಸಬೇಕಾಗಿರುವ ಮಾನದಂಡಗಳು:<br><br>• ರೈತ ಕುಟುಂಬದ ಎಲ್ಲಾ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.<br><br>• ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗುತ್ತಾರೆ.<br><br>• 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿ ವೇತನವನ್ನು ವಿತರಿಸುವುದು. |

<table>
<tr>
<td></td>
<td></td>
<td>
ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer) ಮೂಲಕ ವರ್ಗಾಯಿಸುವುದು.<br><br>
• ಸರ್ಕಾರದ ಆದೇಶ ಸಂ-AGRI-AML/141/2021-22 ದಿ: 30.08.2022 ರನ್ವಯ 2022-23ನೇ ಶೈಕ್ಷಣಿಕ ಸಾಲಿನಿಂದ ಭೂ ರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಉದ್ದೇಶದಿಂದ ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮವನ್ನು ವಿಸ್ತರಿಸಿ ಆದೇಶ ಹೊರಡಿಸಲಾಗಿರುತ್ತದೆ.<br><br>
• ಕಾರ್ಯಕ್ರಮದಡಿ ನೀಡಲಾಗುವ ವಿದ್ಯಾರ್ಥಿ ವೇತನದ ವಿವರ:
<table>
<tr><th>ಕ್ರ ಸಂ</th><th>ಕೋರ್ಸ್‌ಗಳು</th><th>ವಿದ್ಯಾರ್ಥಿಗಳು</th><th>ವಿದ್ಯಾರ್ಥಿನಿಯರು</th></tr>
<tr><td>1</td><td>ಪ್ರೌಢಶಾಲಾಶಿಕ್ಷಣ</td><td>———</td><td>ರೂ. 2000/-</td></tr>
<tr><td>2</td><td>ಪಿ.ಯು.ಸಿ / ಐ.ಟಿ.ಐ / ಡಿಪ್ಲೋಮಾ</td><td>ರೂ. 2500/-</td><td>ರೂ. 3000/-</td></tr>
<tr><td>3</td><td>ಬಿ.ಎ./ಬಿ.ಎಸ್.ಸಿ/ಬಿ.ಕಾಂ ಇನ್ನಿತರ ಪದವಿ ಕೋರ್ಸ್‌ಗಳು</td><td>ರೂ. 5000/-</td><td>ರೂ. 5500/-</td></tr>
<tr><td>4</td><td>ಎಲ್.ಎಲ್.ಬಿ / ಪ್ಯಾರಾಮೆಡಿಕಲ್ / ಬಿ.ಫಾರ್ಮ್ / ನರ್ಸಿಂಗ್ ಇನ್ನಿತರ ವೃತ್ತಿಪರ ಕೋರ್ಸ್‌ಗಳು</td><td>ರೂ. 7500/-</td><td>ರೂ. 8000/-</td></tr>
<tr><td>5</td><td>ಎಂ.ಬಿ.ಬಿ.ಎಸ್ / ಬಿ.ಇ / ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು</td><td>ರೂ. 10000/-</td><td>ರೂ. 11000/-</td></tr>
</table>
</td>
</tr>
<tr>
<td>ಆ)</td>
<td>ಪ್ರಸಕ್ತ ಸಾಲಿನಲ್ಲಿ ಎಷ್ಟು ರೈತರ ಮಕ್ಕಳಿಗೆ ವಿದ್ಯಾನಿಧಿ ಯೋಜನೆಯಡಿ ಸೌಲಭ್ಯ ಕಲ್ಪಿಸಲಾಗಿದೆ;</td>
<td>
ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮದಡಿ ದಿನಾಂಕ:17-02-2023 ರವರೆಗೆ 2021-22ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ 10,33,391 ವಿದ್ಯಾರ್ಥಿಗಳಿಗೆ ರೂ.461.212 ಕೋಟಿ ವಿದ್ಯಾರ್ಥಿ ವೇತನ ಹಾಗೂ 2022-23 ನೇ ಶೈಕ್ಷಣಿಕ ಸಾಲಿನ 5,82,262 ವಿದ್ಯಾರ್ಥಿಗಳಿಗೆ ರೂ.260.1742 ಕೋಟಿ ವಿದ್ಯಾರ್ಥಿ ವೇತನ ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗಿದೆ.<br><br>
ಮುಂದುವರೆದು, ಸದರಿ ಕಾರ್ಯಕ್ರಮವು ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೂ ವಿಸ್ತರಿಸಲಾಗಿದ್ದು, ದಿನಾಂಕ:17-02-2023 ರವರೆಗೆ 47,572 ವಿದ್ಯಾರ್ಥಿಗಳಿಗೆ ರೂ.15.5326 ಕೋಟಿ ವಿದ್ಯಾರ್ಥಿ ವೇತನ ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗಿದೆ.
</td>
</tr>
</table>

| | | |
|---|---|---|
| ಇ) | ರೈತರ ಮಕ್ಕಳಿಗೆ ಇನ್ನು ಹೆಚ್ಚಿನ ಸೌಲಭ್ಯ ಕಲ್ಪಿಸಲು ಉದ್ದೇಶಿಸಲಾಗಿದೆಯೇ ; | ಇಲ್ಲ. |
| ಈ) | ಹಾಗಾದಲ್ಲಿ ಅದರ ರೂಪುರೇಷೆಗಳು ಹಾಗೂ ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯವನ್ನು ಒದಗಿಸಲಾಗುವುದು? (ವಿವರಗಳೊಂದಿಗೆ ಮಾಹಿತಿ ನೀಡುವುದು) | ಉದ್ಭವಿಸುವುದಿಲ್ಲ. |

**ಸಂಖ್ಯೆ: AGRI-AML/52/2023**

(ಬಿ.ಸಿ. ಪಾಟೀಲ್)
ಕೃಷಿ ಸಚಿವರು